# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 977
ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 11.03.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯ ರಸ್ತೆ ಸಾರಿಗೆ ನಿಗಮಗಳಲ್ಲಿ ದುಡಿಯುತ್ತಿರುವ ಅಧಿಕಾರಿ, ನೌಕರರಿಗೆ ಸಕಾಲದಲ್ಲಿ ವೇತನ ಪರಿಷ್ಕರಣೆಯಾಗದಿರುವುದು ಅಲ್ಲದೇ 38 ತಿಂಗಳ ವೇತನ ಹಿಂಬಾಕಿಯು ಸಿಗದೆ ಅವರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯ ರಸ್ತೆ ಸಾರಿಗೆ ನಿಗಮಗಳು ರಸ್ತೆ ಸಾರಿಗೆ ನಿಗಮಗಳ ಕಾಯ್ದೆ-1950 (The Road Transport Corporation Act,1950) ರಡಿ ಅಸ್ತಿತ್ವಕ್ಕೆ ಬಂದಿರುವ ಸರ್ಕಾರಿ ಸ್ವಾಮ್ಯದ ಸ್ವಾಯತ್ತ ಸಂಸ್ಥೆ ಆಗಿರುತ್ತವೆ. ರಸ್ತೆ ಸಾರಿಗೆ ನಿಗಮಗಳ ನಿರ್ವಹಣೆ ಮತ್ತು ಸಿಬ್ಬಂದಿಗಳ ವೇತನ ಹಾಗೂ ಎಲ್ಲಾ ಆರ್ಥಿಕ ಸೌಲಭ್ಯಗಳನ್ನು ನಿಗಮಗಳು ತನ್ನ ಆಂತರಿಕ ಮೂಲಗಳಿಂದಲೇ ಭರಿಸಬೇಕಾಗಿರುತ್ತದೆ. ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳ ಅಧಿಕಾರಿ /ನೌಕರರಿಗೆ ಕೈಗಾರಿಕಾ ಒಪ್ಪಂದದನ್ವಯ ನಾಲ್ಕು ವರ್ಷಗಳಿಗೊಮ್ಮೆ ವೇತನವನ್ನು ಪರಿಷ್ಕರಿಸುವ ಪದ್ಧತಿ ಜಾರಿಯಲ್ಲಿದ್ದು, ನಿಗಮಗಳ ಆರ್ಥಿಕ ಸಾಮರ್ಥ್ಯವನ್ನು ಗಣನೆಗೆ ತೆಗೆದುಕೊಂಡು ಸರ್ಕಾರದ ಅನುಮೋದನೆ ಪಡೆದು ವೇತನ ಪರಿಷ್ಕರಣೆಯನ್ನು ಮಾಡುವ ಪದ್ಧತಿ ಜಾರಿಯಲ್ಲಿರುತ್ತದೆ.<br><br>ಅದರಂತೆ 2016ರಲ್ಲಿ ವೇತನ ಪರಿಷ್ಕರಣೆಯಾಗಿದ್ದು, ತದನಂತರ 2020ನೇ ವರ್ಷದಲ್ಲಿ ವೇತನ ಪರಿಷ್ಕರಣೆ ಮಾಡಬೇಕಾಗಿತ್ತು. ಆದರೆ, ಸರ್ಕಾರದ ಆದೇಶ ಸಂಖ್ಯೆ:ಟಿಡಿ 12 ಟಿಸಿಬಿ 2023, ದಿನಾಂಕ:17.03.2023ರಲ್ಲಿ ರಸ್ತೆ ಸಾರಿಗೆ ನಿಗಮಗಳ ಅಧಿನಿಯಮ, 1950ರ ಸೆಕ್ಷನ್ 34(1)ರನ್ವಯ ದಿನಾಂಕ:01.03.2023 ರಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಮತ್ತು ಪೂರ್ವ ಕಿಂಕೋ ಅಧಿಕಾರಿಗಳು/ ನೌಕರರೂ ಸೇರಿದಂತೆ ದಿನಾಂಕ:31.12.2019 ರಂದು ಪಡೆಯುತ್ತಿದ್ದ ಮೂಲ ವೇತನವನ್ನು ಶೇ.15ರಷ್ಟು ಹೆಚ್ಚಿಸಿ, ಅದರಂತೆ ವೇತನ ಶ್ರೇಣಿಗಳನ್ನು ಸರಿಷ್ಕರಿಸಿ ದಿನಾಂಕ:01.03.2023ರಿಂದ ಜಾರಿಗೊಳಿಸಲಾಗಿದೆ. |
| ಆ. | ಬಂದಿದ್ದಲ್ಲಿ, ಪ್ರಸ್ತುತ ಸಾರಿಗೆ ನಿಗಮಗಳು ತಮ್ಮ ಅಧಿಕಾರಿ ಮತ್ತು ನೌಕರರಿಗೆ ಪಾವತಿಸಲು ಉಳಿಸಿಕೊಂಡಿರುವ ವಿವಿಧ ರೀತಿಯ ಬಾಕಿಗಳ ವಿವರಗಳೇನು; ಒಟ್ಟು ಮೊತ್ತವೆಷ್ಟು; | ನಾಲ್ಕು ಸಾರಿಗೆ ಸಂಸ್ಥೆ/ ನಿಗಮಗಳಲ್ಲಿ ಫೆಬ್ರುವರಿ-2026ರ ಮಾಹೆಯ ಅಂತ್ಯಕ್ಕೆ ತಮ್ಮ ಅಧಿಕಾರಿ ಮತ್ತು ನೌಕರರಿಗೆ ಹಾಗೂ ನಿವೃತ್ತ ನೌಕರರಿಗೆ ಪಾವತಿಸಲು ಉಳಿಸಿಕೊಂಡಿರುವ ವಿವಿಧ ರೀತಿಯ ಹಿಂಬಾಕಿ ವಿವರ ಕೆಳಕಂಡಂತಿದೆ:- (ರೂ. ಕೋಟಿಗಳಲ್ಲಿ) (see table below) |
| ಇ. | ಪ್ರಸ್ತುತ ಸಾರಿಗೆ ನಿಗಮಗಳು ತಮ್ಮ ಅಧಿಕಾರಿ ಮತ್ತು ನೌಕರರಿಗೆ ಪಾವತಿಸಲು ಉಳಿಸಿಕೊಂಡಿರುವ ವಿವಿಧ ರೀತಿಯ ಬಾಕಿ ಮೊತ್ತವನ್ನು ಪಾವತಿಸಲು ಮತ್ತು ವೇತನ ಪರಿಷ್ಕರಣೆ ಮಾಡಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು; | |
| ಈ. | ನಿವೃತ್ತ ನೌಕರರಿಗೆ ರಸ್ತೆ ಸಾರಿಗೆ ನಿಗಮಗಳು ಪಾವತಿಸಬೇಕಾಗಿರುವ ಬಾಕಿ ಮೊತ್ತ ಎಷ್ಟು; ಮತ್ತು ಸದರಿ | ರಸ್ತೆ ಸಾರಿಗೆ ನಿಗಮಗಳ ನಿರ್ವಹಣೆ ಮತ್ತು ಸಿಬ್ಬಂದಿಗಳ ವೇತನ ಹಾಗೂ ಎಲ್ಲಾ ಆರ್ಥಿಕ ಸೌಲಭ್ಯಗಳನ್ನು ನಿಗಮಗಳು ತನ್ನ ಆಂತರಿಕ ಮೂಲಗಳಿಂದಲೇ ಭರಿಸಬೇಕಾಗಿರುತ್ತದೆ. |

(ರೂ. ಕೋಟಿಗಳಲ್ಲಿ)

| ವಿವರ | ಕ.ರಾ.ರ.ಸಾ.ನಿಗಮ | ಬೆಂ.ಮ.ಸಾ.ಸಂಸ್ಥೆ | ವಾ.ಕ.ರ.ಸಾ.ಸಂಸ್ಥೆ | ಕ.ಕ.ರ.ಸಾ.ನಿಗಮ |
|---|---|---|---|---|
| ನಿವೃತ್ತ ನೌಕರರ ಉಪಧನ ಹಾಗೂ ರಜೆ ನಗದೀಕರಣ | 39.23 | 187.58 | 50.05 | 28.80 |
| ಸಿಬ್ಬಂದಿಗಳ ಬಾಕಿ | 44.30 | 148.97 | 37.35 | 28.53 |
| **ಒಟ್ಟು** | **83.53** | **336.55** | **87.04** | **57.33** |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td>ಬಾಕಿ ಮೊತ್ತವನ್ನು ಯಾವ ಕಾಲಮಿತಿಯೊಳಗೆ ನಿವೃತ್ತ ನೌಕರರಿಗೆ ಸಂಪೂರ್ಣವಾಗಿ ಪಾವತಿಸಲಾಗುವುದು;</td><td rowspan="2">

**ಮೇ 2023 ರವರೆಗೆ ನಿಗಮವಾರು ಬಾಕಿಯಿದ್ದ ಹೊಣೆಗಾರಿಕೆಯ ವಿವರ ಕೆಳಕಂಡಂತಿದೆ:-**

**(ರೂ. ಕೋಟಿಗಳಲ್ಲಿ)**

<table>
<tr><th>ನಿಗಮ/ ಸಂಸ್ಥೆ</th><th>ಬಾಕಿ ಹೊಣೆಗಾರಿಕೆ ಮೊತ್ತ</th></tr>
<tr><td>ಕ.ರಾ.ರ.ಸಾ.ನಿಗಮ</td><td>1211.18</td></tr>
<tr><td>ಬೆಂ.ಮ.ಸಾ.ಸಂಸ್ಥೆ</td><td>1383.86</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>1253.01</td></tr>
<tr><td>ಕ.ಕ.ರ.ಸಾ.ನಿಗಮ</td><td>251.33</td></tr>
<tr><td>ಒಟ್ಟು</td><td>4099.38</td></tr>
</table>

2023ರ ಮೇ ತಿಂಗಳ ನಂತರ ದಿನನಿತ್ಯ ಡೀಸೆಲ್ ತೈಲ ಬೆಲೆ ಹೆಚ್ಚಳದೊಂದಿಗೆ ಸಿಬ್ಬಂದಿಗಳ ವೇತನ ಹೆಚ್ಚಳ, ವಾಹನ ಬಿಡಿ ಭಾಗಗಳ ವೆಚ್ಚ ಒಳಗೊಂಡಂತೆ ಒಟ್ಟು ಕಾರ್ಯಾಚರಣೆ ವೆಚ್ಚ ಹೆಚ್ಚಾಗಿ ನಿಗಮಗಳಿಗೆ ಹೆಚ್ಚಿನ ಆರ್ಥಿಕ ಹೊರೆ ಉಂಟಾಗಿದೆ.

ಮೇಲ್ಕಂಡ ಅಂಶಗಳನ್ನು ಗಮನಿಸಿ, ನಿಗಮಗಳ ಬಾಕಿ ಹೊಣೆಗಾರಿಕೆಯನ್ನು ಕಡಿಮೆ ಮಾಡಲು ಹಾಗೂ ಸಂಸ್ಥೆಗಳನ್ನು ಆರ್ಥಿಕವಾಗಿ ಸದೃಢಗೊಳಿಸಲು ಸರ್ಕಾರದಿಂದ ನಾಲ್ಕು ನಿಗಮಗಳಿಗೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ ಹಾಗೂ ಮೋಟಾರು ವಾಹನ ತೆರಿಗೆ ಪಾವತಿಯಿಂದ ವಿನಾಯಿತಿ ನೀಡಲಾಗಿದೆ:-

ನಾಲ್ಕು ಸಾರಿಗೆ ಸಂಸ್ಥೆಗಳಿಗೆ ದಿನಾಂಕ:01.01.2020ರಿಂದ ದಿನಾಂಕ:28.02.2023 ರವರೆಗಿನ ಅವಧಿಯಲ್ಲಿ ಸೇವಾನಿವೃತ್ತಿ ಹೊಂದಿದ ಅಧಿಕಾರಿ/ ನೌಕರರಿಗೆ ದಿನಾಂಕ:01.01.2020ರ ಪರಿಷ್ಕೃತ ವೇತನ ಶ್ರೇಣಿಯನ್ವಯ ಪಾವತಿಸಬೇಕಾದ ಉಪಧನ ಹಾಗೂ ಗಳಿಕೆ ರಜೆ ನಗದೀಕರಣದ ವ್ಯತ್ಯಾಸ ಮೊತ್ತವಾದ ಒಟ್ಟು ರೂ.224.05 ಕೋಟಿಗಳನ್ನು ಸರ್ಕಾರದ ಆದೇಶ ಸಂಖ್ಯೆ: ಟಿಡಿ 72 ಟಿಸಿಬಿ 2024 (ಭಾ-1), ದಿನಾಂಕ:07.12.2024ರಲ್ಲಿ ನಿಗಮವಾರು ಈ ಕೆಳಕಂಡಂತೆ ಸರ್ಕಾರದ ಅನುದಾನದ ರೂಪದಲ್ಲಿ ಬಿಡುಗಡೆ ಮಾಡಲಾಗಿದ್ದು, ಅದರಂತೆ ನಿವೃತ್ತ ನೌಕರರಿಗೆ ಈಗಾಗಲೇ ಪಾವತಿ ಮಾಡಲಾಗಿರುತ್ತದೆ.

**(ರೂ.ಕೋಟಿಗಳಲ್ಲಿ)**

<table>
<tr><th>ಸಂಸ್ಥೆ</th><th>ಅನುದಾನ</th></tr>
<tr><td>ಕ.ರಾ.ರ.ಸಾ.ನಿಗಮ</td><td>86.55</td></tr>
<tr><td>ಬೆಂ.ಮ.ಸಾ.ಸಂಸ್ಥೆ</td><td>50.25</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>51.50</td></tr>
<tr><td>ಕ.ಕ.ರ.ಸಾ.ನಿಗಮ</td><td>35.75</td></tr>
<tr><td>ಒಟ್ಟು</td><td>224.05</td></tr>
</table>

ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಿಗೆ ನವೆಂಬರ್-2024ರ ಅಂತ್ಯಕ್ಕೆ ಬಾಕಿ ಉಳಿಸಿಕೊಂಡಿರುವ ಶಾಸನಬದ್ಧ ಪಾವತಿಯಾದ ಭವಿಷ್ಯ ನಿಧಿ ಹಾಗೂ ಇಂಧನ ಬಾಕಿ ಮೊತ್ತ ಪಾವತಿಸಲು ಸರ್ಕಾರದ ಖಾತರಿ / ಗ್ಯಾರಂಟಿಯೊಂದಿಗೆ ಹಣಕಾಸು ಸಂಸ್ಥೆಗಳಿಂದ ರೂ.2000/- ಕೋಟಿ ಸಾಲ ಪಡೆಯಲು ಈ ಕೆಳಕಂಡಂತೆ ಅನುಮೋದನೆ ನೀಡಲಾಗಿದ್ದು, ಸದರಿ ಸಾಲದ ಮೊತ್ತವನ್ನು ಸಂಪೂರ್ಣವಾಗಿ ಸರ್ಕಾರವೇ ಮರು ಪಾವತಿಸುತ್ತಿದೆ.

</td></tr>
<tr><td>ಉ</td><td>ಸಾರಿಗೆ ನಿಗಮಗಳಲ್ಲಿ ನಿಗದಿತ ಅವಧಿಯೊಳಗೆ ವೇತನ ಪರಿಷ್ಕರಣೆ ಮಾಡದಿರಲು ಕಾರಣಗಳೇನು; ಮತ್ತು ಯಾವ ಕಾಲಮಿತಿಯೊಳಗೆ ವೇತನ ಪರಿಷ್ಕರಣೆ ಮಾಡಲಾಗುವುದು ಮತ್ತು 38 ತಿಂಗಳ ವೇತನ ಹಿಂಬಾಕಿಯನ್ನು ಸಂಪೂರ್ಣವಾಗಿ ಪಾವತಿಸಲಾಗುವುದು?</td></tr>
</table>

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|

(ರೂ. ಕೋಟಿಗಳಲ್ಲಿ)

| ಸಂಸ್ಥೆ/ನಿಗಮ | ಮೊತ್ತ |
|---|---|
| ಕ.ರಾ.ರ.ಸಾ.ನಿಗಮ | 623.80 |
| ಬೆಂ.ಮ.ಸಾ.ಸಂಸ್ಥೆ | 589.20 |
| ವಾ.ಕ.ರ.ಸಾ.ಸಂಸ್ಥೆ | 646.00 |
| ಕ.ಕ.ರ.ಸಾ.ನಿಗಮ | 141.00 |
| **ಒಟ್ಟು** | **2000.00** |

2025-26ನೇ ಸಾಲಿನಲ್ಲಿ ಸದರಿ ರೂ.2000 ಕೋಟಿ ಸಾಲದ ಮೊತ್ತದ ಅಸಲು ಮತ್ತು ಬಡ್ಡಿ ಪಾವತಿಗಾಗಿ ನಾಲ್ಕು ಸಾರಿಗೆ ನಿಗಮಗಳಿಗೆ ಒಟ್ಟು ರೂ.452 ಕೋಟಿಗಳ ಅನುದಾನವನ್ನು ಸಹ ಒದಗಿಸಲಾಗಿದ್ದು, ಸದರಿ ಅನುದಾನವನ್ನು ತ್ರೈಮಾಸಿಕವಾರು ಬಿಡುಗಡೆಗೊಳಿಸಲಾಗುತ್ತಿದೆ.

2025-26ನೇ ಸಾಲಿನ ಆಯವ್ಯಯ ಘೋಷಣೆಯನ್ವಯ 2000 ಡೀಸಲ್ ಬಸ್‌ಗಳಿಗೆ ತಗಲುವ ವೆಚ್ಚವನ್ನು ಸರ್ಕಾರದಿಂದ ಭರಿಸಿ ಈ ಕೆಳಕಂಡಂತೆ ನಿಗಮವಾರು ಖರೀದಿಸಲು ಕ್ರಮವಹಿಸಲಾಗುತ್ತಿದೆ.

| ಸಂಸ್ಥೆ/ನಿಗಮ | ಬಸ್‌ಗಳ ಸಂಖ್ಯೆ |
|---|---|
| ಕ.ರಾ.ರ.ಸಾ.ನಿಗಮ | 900 |
| ವಾ.ಕ.ರ.ಸಾ.ಸಂಸ್ಥೆ | 700 |
| ಕ.ಕ.ರ.ಸಾ.ನಿಗಮ | 400 |
| **ಒಟ್ಟು** | **2000** |

ನಾಲ್ಕು ಸಾರಿಗೆ ನಿಗಮಗಳ ನಗದು ಕೊರತೆಯನ್ನು ನಿಭಾಯಿಸಲು 2023-24 ಮತ್ತು 2024-25ನೇ ಸಾಲಿನಲ್ಲಿ ನಿಗಮಗಳು ಕ್ರಮವಾಗಿ ಸರ್ಕಾರಕ್ಕೆ ಪಾವತಿ ಮಾಡಬೇಕಾದ ಮೋಟಾರು ವಾಹನ ತೆರಿಗೆ ರೂ.581.47 ಕೋಟಿ ಮತ್ತು ರೂ.637.76 ಕೋಟಿ ಸೇರಿದಂತೆ ಒಟ್ಟು ರೂ.1219.23 ಕೋಟಿಗಳ ಪಾವತಿಯಿಂದ ವಿನಾಯಿತಿ ನೀಡಲಾಗಿದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ:ಟಿಡಿ 12 ಟಿಸಿಬಿ 2023, ದಿನಾಂಕ:18.02.2026ರಲ್ಲಿ ಸಾರಿಗೆ ನಿಗಮಗಳ ನೌಕರರಿಗೆ ಕಳೆದ ಬಾರಿಯ 38 ತಿಂಗಳ ವೇತನ ಹಿಂಬಾಕಿ ಹಾಗೂ ವೇತನ ಪರಿಷ್ಕರಣೆಗೆ ಸಂಬಂಧಿಸಿದಂತೆ 2020ರಿಂದ 2022ರವರೆಗಿನ ಕೋವಿಡ್-19ರ ಹಿನ್ನಲೆಯಲ್ಲಿ ಹಾಗೂ ಸಾರಿಗೆ ನಿಗಮಗಳ ಆರ್ಥಿಕ ಪರಿಸ್ಥಿತಿ ಹಾಗೂ ಹೊಣೆಗಾರಿಕೆಗಳನ್ನು ಪರಿಗಣಿಸಿ, ವೇತನ ಪರಿಷ್ಕರಣೆ ಕುರಿತು ರಾಜ್ಯ ರಸ್ತೆ ಸಾರಿಗೆ ಕಾರ್ಮಿಕ ಸಂಘಟನೆಗಳ ಪದಾಧಿಕಾರಿಗಳೊಂದಿಗೆ ಮಾನ್ಯ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ದಿನಾಂಕ:04.07.2025, 04.08.205 ಮತ್ತು 26.11.2025ರಂದು ಸಭೆ ನಡೆಸಿ ಬೇಡಿಕೆಗಳ ಬಗ್ಗೆ ಚರ್ಚಿಸಿರುತ್ತಾರೆ ಹಾಗೂ ದಿನಾಂಕ:13.12.2025ರಂದು ಕಾರ್ಮಿಕ ಸಂಘಟನೆಯವರೊಂದಿಗೆ ಸಭೆ ನಡೆಸಿ ಅವರ ಅಹವಾಲುಗಳನ್ನು ಪಡೆದು ಪರಿಶೀಲಿಸಿ, ದಿನಾಂಕ:01.01.2021ರಿಂದ 28.02.2023ರವರೆಗೆ ಒಟ್ಟು 26 ತಿಂಗಳ ಹಿಂಬಾಕಿ ಮೊತ್ತ ರೂ.1271.92 ಕೋಟಿಗಳನ್ನು ಪಾವತಿಸಲು ಹಾಗೂ ದಿನಾಂಕ:01.04.2025 ರಿಂದ ಜಾರಿಗೆ ಬರುವಂತೆ ಶೇಕಡಾವಾರು ಎಷ್ಟು ಪ್ರಮಾಣದಲ್ಲಿ ಪರಿಷ್ಕರಿಸಬೇಕು ಎಂಬುದರ ಕುರಿತು ಕಾರ್ಮಿಕ ಸಂಘಟನೆಗಳ ಜೊತೆ ಚರ್ಚಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಲು ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಸಂಖ್ಯೆ: ಟಿಡಿ 37 ಟಿಸಿಕ್ಯೂ 2026

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು